ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೫೦

**ಪಟ್ಟಿ – ೦೧**

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ

ಶುಕ್ರವಾರ, ದಿನಾಂಕ : ೨೯ನೇ ಜನವರಿ, ೨೦೨೧

---

## ಸಮೂಹ – V

೧. ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಪಶುಸಂಗೋಪನೆ ಸಚಿವರು.

೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

೫. ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

೬. ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

೭. ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು.

---

## ಅಧಿಕಾರಿಗಳ ತನಿಖೆ ವಿವರ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೦೧ (೫೬) ಮಾನ್ಯ ಪಶುಸಂಗೋಪನೆ ಮತ್ತು ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಸಾಲ ಪಡೆದ ಫಲಾನುಭವಿಗಳು ಸಾಲ ಪಡೆದ ಉದ್ದೇಶಕ್ಕಾಗಿ ಬಳಸಿಕೊಳ್ಳದೆ ಕೇವಲ ಸರ್ಕಾರದಿಂದ ಸಿಗುವ ಸಬ್ಸಿಡಿ ಹಣ ಮಾತ್ರ ಪಡೆದುಕೊಂಡು ಸರ್ಕಾರಕ್ಕೆ ಮೋಸ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಲಾಗಿದೆಯೇ ; ತನಿಖೆ ನಡೆಸುವುದಾದರೆ ಯಾವಾಗ ನಡೆಸಲಾಗುವುದು ;

(ಆ) ಇದರಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)

## ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿ ಸ್ವಯಂ ಸೇವೆಗಳ ಯೋಜನೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೦೨ (೫೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ ನಿರ್ಗತಿಕರ ಮಕ್ಕಳ ಕುಟೀರ, ಕಿವುಡ ಮತ್ತು ಮೂಕ ಮಕ್ಕಳ ವಿಶೇಷ ಶಾಲೆ,

ವೃದ್ಧಾಶ್ರಮಗಳು, ಅನಾಥಾಶ್ರಮಗಳು, ಸಾಂತ್ವಾನ ಕೇಂದ್ರಗಳ ಸಂಖ್ಯೆ ಎಷ್ಟು ; (ಸಮಗ್ರವಾದ ಮಾಹಿತಿಯನ್ನು ಒದಗಿಸುವುದು)

(ಆ) ೨೦೧೮-೧೯, ೨೦೧೯-೨೦ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಅಂಗವಿಕಲರಿಗೆ ಮಂಜೂರಾಗಿರುವ ೩ ಚಕ್ರವಾಹನಗಳ ಸಂಖ್ಯೆ ಎಷ್ಟು ; ಈ ಯೋಜನೆಯ ಫಲಾನುಭವಿಗಳೆಷ್ಟು ; ಫಲಾನುಭವಿಗಳ ವಿವರ ಒದಗಿಸುವುದು ?

## ಬೀದರ್ ಜಿಲ್ಲೆಯಲ್ಲಿ NEKRTC ಘಟಕ-೧ರಲ್ಲಿ ೫೯ ಲಕ್ಷ ಮೇಲ್ಪಟ್ಟು ಅವ್ಯವಹಾರದ ತನಿಖೆ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೦೩ (೫೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಸಾರಿಗೆ ವಿಭಾಗದಲ್ಲಿ ನೇಮಕವಾದ ದರ್ಜೆ-೩ ಮತ್ತು ೪ ಅಭ್ಯರ್ಥಿಗಳಿಗೆ ೨ ವರ್ಷದ ತರಬೇತಿ ಅವಧಿಯಲ್ಲಿ ಕಾರ್ಮಿಕ ಇಲಾಖೆಯ ನಿಯಮಗಳಿಗಿಂತ ಕಡಿಮೆ ಸ್ಟೈಫಂಡ್ ನೀಡುತ್ತಿರುವುದರಿಂದ, ಸದರಿ ತರಬೇತಿ ಅವಧಿ ತೆಗೆದು ಹಾಕಿ ಪರೀಕ್ಷಾರ್ಥ ಸೇವೆಗೆ ನೇಮಕ ಮಾಡಿಕೊಳ್ಳಲು ಅವಕಾಶವಿದೆಯೇ ;

(ಆ) ಬೀದರ್ ಜಿಲ್ಲೆಯ NEKRTC ಘಟಕ-೧ರಲ್ಲಿ ರೂ. ೫೯ ಲಕ್ಷ ಮೇಲ್ಪಟ್ಟು ಅವ್ಯವಹಾರ ನಡೆದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೦೪ (೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಅನುದಾನದಿಂದ ಕಾಮಗಾರಿಗಳು ಯಾವ ಹಂತದಲ್ಲಿದೆ ; ಅವುಗಳಿಗೆ ಖರ್ಚು ಮಾಡಿರುವ ಅನುದಾನ ಎಷ್ಟು ; ಕಾಮಗಾರಿಗಳು ಯಾವಾಗ ಪೂರ್ಣಗೊಳ್ಳುತ್ತದೆ ;

(ಆ) ೨೦೧೮–೧೯, ೨೦೧೯–೨೦ರಲ್ಲಿ ಬೀದರ್ ಜಿಲ್ಲೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ 'ನಮ್ಮ ಗ್ರಾಮ ನಮ್ಮ ರಸ್ತೆ' ಯೋಜನೆಯಡಿಯಲ್ಲಿ ಮಂಜೂರಾದ ಅನುದಾನ ಎಷ್ಟು ; ಖರ್ಚು ಆದ ಅನುದಾನ ಎಷ್ಟು ; ಪ್ರಗತಿ ಹಂತದಲ್ಲಿರುವ ಕಾಮಗಾರಿಗಳು ಯಾವುವು ;

(ಇ) ಈ ಜಿಲ್ಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣ ನೀರು ಸರಬರಾಜು ಯೋಜನೆಯಡಿಯಲ್ಲಿ ೨೦೧೮–೧೯, ೨೦೧೯–೨೦ರಲ್ಲಿ ಮಂಜೂರಾದ ಅನುದಾನ ಎಷ್ಟು ; ಖರ್ಚು ಆದ ಅನುದಾನ ಎಷ್ಟು ; ಪ್ರಗತಿ ಹಂತದಲ್ಲಿರುವ ಕಾಮಗಾರಿಗಳು ಯಾವುವು ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೦೫ (೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಮಂಜೂರಾದ ಕಾಮಗಾರಿಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಆ) ವಿವಿಧ ಯೋಜನೆಗಳಡಿಯಲ್ಲಿ ತೆಗೆದುಕೊಂಡ ಭೌತಿಕ ಹಾಗೂ ಆರ್ಥಿಕ ಗುರಿಯೆಷ್ಟು ; (ವಿವರ ಒದಗಿಸುವುದು)

(ಇ) ಇಲ್ಲಿಯವರೆಗೆ ವಿವಿಧ ಶೀರ್ಷಿಕೆಯಡಿಯಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಎಷ್ಟು ಖರ್ಚಾಗಿದೆ ; ಗುತ್ತಿಗೆದಾರರಿಗೆ ನೀಡಬೇಕಾದ ಹಣವೆಷ್ಟು ? (ಮಾಹಿತಿ ನೀಡುವುದು)

## ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೦೬ (೨೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಬಿದರಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಡಿ. ಹೊಸಹಳ್ಳಿ ಗ್ರಾಮದಲ್ಲಿ ಮೂಲಭೂತ ಸೌಲಭ್ಯಗಳಾದ ರಸ್ತೆ, ಸಿ.ಸಿ. ಚರಂಡಿ, ವಿದ್ಯುತ್ ಬೀದಿ ದೀಪ ಹಾಗೂ ಕುಡಿಯುವ ನೀರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಂಬಂಧಪಟ್ಟ ಅಧಿಕಾರಿಗಳಿಗೆ ಹಲವು ಬಾರಿ ಈ ಬಗ್ಗೆ ಗಮನಕ್ಕೆ ತಂದಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದೇ ಇರುವುದರಿಂದ, ಮೂಲಭೂತ ಸೌಲಭ್ಯಗಳು ಗ್ರಾಮಕ್ಕೆ ದೊರಕದೇ ವಂಚಿತರಾಗಿದ್ದು, ಗ್ರಾಮ ಸ್ವರಾಜ್ ಕನಸು ನನಸಾಗದೇ ಉಳಿದು ಗ್ರಾಮಸ್ಥರಿಗೆ ಅನಾನುಕೂಲ ಆಗಿರುವುದರಿಂದ ಇದನ್ನು ತಪ್ಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ;

(ಇ) ಹಾಗಿದ್ದಲ್ಲಿ, ಎಷ್ಟು ಸಮಯದೊಳಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು ? (ಮಾಹಿತಿಯನ್ನು ಒದಗಿಸುವುದು)

## ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಇರುವ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೦೭ (೧೯) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಬಹುದು ಮತ್ತು ಯೋಜನೆಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳೇನು ; ಈ ಯೋಜನೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಮಾಡಬಹುದು ; (ಸದರಿ ಯೋಜನೆಗಳಲ್ಲಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಇರುವ ಸರ್ಕಾರಿ ಸುತ್ತೋಲೆ/ಆದೇಶಗಳ ಪ್ರತಿಗಳನ್ನು ನೀಡುವುದು)

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಅಲ್ಪಸಂಖ್ಯಾತರ ಇಲಾಖೆಯಿಂದ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶದಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಸರ್ಕಾರದ ಜಾಗ/ಸ್ಥಳಗಳಲ್ಲಿ ಕಳೆದ ೩೦–೪೦ ವರ್ಷಗಳಿಂದ ವಾಸವಾಗಿರುವ ಕುಟುಂಬಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೦೮ (೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಸರ್ಕಾರದ ಜಾಗ/ಸ್ಥಳಗಳಲ್ಲಿ ಕಳೆದ ೩೦–೪೦ ವರ್ಷಗಳಿಂದ ವಾಸವಾಗಿರುವ ಕುಟುಂಬಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಸರ್ಕಾರಿ ಜಾಗದಲ್ಲಿ ವಾಸ ಮಾಡುತ್ತಿರುವ ಈ ಕುಟುಂಬಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಸರ್ಕಾರದಿಂದ ನೀಡಲಾಗಿದೆಯೇ ; (ತಾಲ್ಲೂಕುವಾರು, ಕುಟುಂಬವಾರು, ಫಲಾನುಭವಿಗಳವಾರು ಮಾಹಿತಿ ನೀಡುವುದು)

(ಇ) ಸದರಿ ಕುಟುಂಬಗಳಿಗೆ ಮೂಲಭೂತ ಸೌಕರ್ಯವನ್ನು ಪಂಚಾಯಿತಿಯಿಂದ ಒದಗಿಸಿ ಹಕ್ಕುಪತ್ರ ನೀಡದೆ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಇವರಿಗೆ ಹಕ್ಕು ಪತ್ರಗಳನ್ನು ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹಕ್ಕು ಪತ್ರ ವಿತರಣೆ ಇರುವುದರಿಂದ ಸರ್ಕಾರಕ್ಕೆ ಪಾವತಿಸುವ ತೆರಿಗೆಯ ಮೊತ್ತ ಸರ್ಕಾರದ ಖಜಾನೆಗೆ ಜಮಾ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## BRC/CRC ಸೇವೆಯನ್ನು ಮುಂದುವರೆಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೦೯ (೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) NRDWP ಕೇಂದ್ರ ಪುರಸ್ಕೃತ ಯೋಜನೆಯ Support Activity ಘಟಕದಡಿ ೨೦೧೧–೧೨ನೇ ಸಾಲಿನಲ್ಲಿ ನೇಮಕಗೊಂಡು ಕಾರ್ಯ ನಿರ್ವಹಿಸುವ BRC/CRC ಗಳ ಸೇವೆಯನ್ನು ಮುಂದುವರಿಸುವ ಕುರಿತು ಈ ಹಿಂದಿನ ಅಧಿವೇಶನದಲ್ಲಿ ಸಚಿವರು ಭರವಸೆ ನೀಡಿರುವುದು ನಿಜವೇ ; ಹಾಗಿದ್ದಲ್ಲಿ ಭರವಸೆ ಈಡೇರಿದೆಯೇ ;

(ಆ) ಸರ್ಕಾರದ ಭರವಸೆಯಂತೆ ಯಾವ–ಯಾವ ಜಿಲ್ಲೆಗಳ ಎಷ್ಟು ಮಂದಿ BRC/CRC ಗಳ ಸೇವೆಯನ್ನು ಮುಂದುವರಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು WP 5628/2020 ಹಾಗೂ ಇತರೆ ನ್ಯಾಯಾಲಯಗಳಲ್ಲಿ BRC/CRC ಸಂಯೋಜಕರುಗಳು ತಮ್ಮ ಸೇವೆಯನ್ನು ಜಲ್ ಜೀವನ್ ಮಿಷನ್ ಯೋಜನೆಯಲ್ಲೂ ಮುಂದುವರಿಸಲು ಧಾವೆ ಹೂಡಿರುವುದು ನಿಜವೇ ; ಹಾಗಾದರೆ ಸರ್ಕಾರ ಇದರ ಸಂಬಂಧ ಯಾವ ಕ್ರಮ ಕೈಗೊಂಡಿದೆ ;

(ಈ) BRC/CRC ಸಂಯೋಜಕರುಗಳ ಮನವಿಯ ಮೇರೆಗೆ ಕೇಂದ್ರ ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ರಾಜ್ಯ ಸರ್ಕಾರಗಳಿಗೆ ಆರ್ಥಿಕ ಮತ್ತು ತಾಂತ್ರಿಕ ನೆರವನ್ನು ಮಾತ್ರ

ನೀಡುತ್ತಿರುವುದಾಗಿ ಸೂಚಿಸಿದ್ದು, ಸಿಬ್ಬಂದಿ ನೇಮಕ ವಿಚಾರ ರಾಜ್ಯ ಸರ್ಕಾರದ ವಿವೇಚನೆಗೆ ಬಿಟ್ಟಿರುವುದಾಗಿ ತಿಳಿಸಿರುವುದು ನಿಜವೇ ; (ವಿವರವಾಗಿ ಮಾಹಿತಿ ನೀಡುವುದು)

(ಉ) ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ೭೬೧೦ CH ರಂತೆ ಸರ್ಕಾರವು Policy dicision ಮಾಡಬೇಕಾಗಿರುವುದು ನಿಜವೇ ;

(ಊ) ಯಾವ ಕಾಲಮಿತಿಯಲ್ಲಿ ಸರ್ಕಾರವು Policy dicision ಮಾಡಿ BRC/CRC ಗಳ ಸೇವೆಯನ್ನು ಯಥಾವತ್ತಾಗಿ ಮುಂದುವರೆಸುವುದು ?

## ಎನ್.ಆರ್.ಇ.ಜಿ.ಪಿ ಕಾರ್ಯಕ್ರಮದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦ (೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎನ್.ಆರ್.ಇ.ಜಿ.ಪಿ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ; ಇದರಲ್ಲಿ ಖರ್ಚಾದ ಅನುದಾನವೆಷ್ಟು ; (ತಾಲ್ಲೂಕುವಾರು ಪಂಚಾಯತಿವಾರು ವಿವರ ನೀಡುವುದು)

(ಆ) ಈ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಹಾಗೂ ಈ ಕಾಮಗಾರಿಗಳಿಗಾಗಿ ಎಷ್ಟು ವೆಚ್ಚ ಮಾಡಲಾಗಿದೆ ಹಾಗೂ ಎಷ್ಟು ಜನರಿಗೆ ಉದ್ಯೋಗ ಕಲ್ಪಿಸಲಾಗಿದೆ ; (ತಾಲ್ಲೂಕುವಾರು ಪಂಚಾಯತಿವಾರು ವಿವರ ನೀಡುವುದು)

(ಇ) ಸದರಿ ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ನಿಗಾವಹಿಸಲು ಯಾವ ಇಲಾಖೆಯ ಅಭಿಯಂತರರಿಗೆ ಜವಾಬ್ದಾರಿ ವಹಿಸಲಾಗಿದೆ ; ಕಳಪೆ ಗುಣಮಟ್ಟದ ಕಾಮಗಾರಿಗಳನ್ನು ಮಾಡಿದ್ದಲ್ಲಿ ಸಂಬಂಧಪಟ್ಟ ಅಭಿಯಂತರರ ವಿರುದ್ಧ ಯಾವ ಕ್ರಮ ವಹಿಸಲಾಗುವುದು ; ಹಾಸನ ಜಿಲ್ಲೆಯಲ್ಲಿ ಅಂತಹ ಪ್ರಕರಣಗಳು ನಡೆದಿವೆಯೇ ; (ವಿವರ ನೀಡುವುದು)

(ಈ) ಎನ್.ಆರ್.ಇ.ಜಿ.ಪಿ ಯೋಜನೆಯನ್ನು ಪ್ರಸ್ತುತ ಮುಂದುವರೆಸಲಾಗುತ್ತಿದೆಯೇ ? (ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧ (೧೩) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆಗಳು ಯಾವುವು ; ಅವುಗಳ ಮಾನದಂಡಗಳೇನು ; (ವಿವರ ನೀಡುವುದು)

(ಆ) ಈ ಯೋಜನೆಗಳಡಿ ಕಳೆದ ೫ ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ; ವೆಚ್ಚ ಮಾಡಿದ ಮೊತ್ತ ಎಷ್ಟು ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಇ) ಕಳೆದ ೫ ವರ್ಷಗಳಲ್ಲಿ ಹಜ್ ಯಾತ್ರೆಗೆ ತೆರಳಲು ಸಹಾಯಧನ ಕೋರಿ ಹಾಸನ ಜಿಲ್ಲೆಯಲ್ಲಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ಇದರಲ್ಲಿ ಎಷ್ಟು ಫಲಾನುಭವಿಗಳಿಗೆ ಸಹಾಯಧನ

ನೀಡಲಾಗಿದೆ ; ಬಾಕಿ ಉಳಿದಿರುವ ಅರ್ಜಿದಾರರಿಗೆ ಯಾವಾಗ ಅವಕಾಶ ಕಲ್ಪಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨ (೧೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಾರಿಗೊಳಿಸುತ್ತಿರುವ ಯೋಜನೆಗಳು ಯಾವುವು ; ಯೋಜನೆಗಳ ಮಾನದಂಡಗಳೇನು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ; ವೆಚ್ಚವಾದ ಮೊತ್ತ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

## ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ನೇರ ನೇಮಕಾತಿ ಮತ್ತು ಬಡ್ತಿ ಮೂಲಕ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩ (೧೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ನೇರ ನೇಮಕಾತಿಯ ಮೂಲಕ ಹಾಗೂ ಬಡ್ತಿಯ ಮೂಲಕ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪ (೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಗ್ರೇಡ್-೨ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಗ್ರೇಡ್-೨ ಗ್ರಾಮ ಪಂಚಾಯಿತಿಗಳನ್ನು ಗ್ರೇಡ್-೧ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು ;

(ಇ) ಗ್ರೇಡ್-೨ ಗ್ರಾಮ ಪಂಚಾಯಿತಿಗಳನ್ನು ಗ್ರೇಡ್-೧ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ ; ಇಲ್ಲವಾದಲ್ಲಿ, ಮೇಲ್ದರ್ಜೆಗೇರಿಸಲು ಇರುವ ತೊಡಕುಗಳೇನು ?

## ರಾಜ್ಯದಲ್ಲಿ ನರೇಗಾ ಯೋಜನೆಯ ಗುರಿಯನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫ (೪೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ನರೇಗಾ ಯೋಜನೆ ಪ್ರಾರಂಭವಾದ ವರ್ಷ ಯಾವುದು ; ರಾಜ್ಯಕ್ಕೆ ಎಷ್ಟು ಮಾನವ ದಿನಗಳು ಗುರಿಯನ್ನು ನಿಗಧಿಪಡಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು) ೨೦೨೦ರ ಅಂತ್ಯಕ್ಕೆ ಎಷ್ಟು ಮಾನವ ದಿನಗಳ ಗುರಿಯನ್ನು ತಲುಪಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯಕ್ಕೆ ಯಾವ ಯಾವ ಸಂದರ್ಭಗಳಲ್ಲಿ ೧೦೦ ದಿನಗಳಿಂದ ಮಾನವ ದಿನಗಳನ್ನು ೧೫೦ ದಿನಗಳವರೆಗೆ ಹೆಚ್ಚಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ ; ಯಾವ ಯಾವ ವರ್ಷಗಳಲ್ಲಿ ೧೦೦ ದಿನಗಳಿಗಿಂತ ಹೆಚ್ಚಿಗೆ ಮಾನವ ದಿನಗಳು ಉದ್ಯೋಗ ಸೃಜಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ ; ಗುರಿಯನ್ನು ತಲುಪಿರುವ ಗ್ರಾಮ ಪಂಚಾಯಿತಿಗಳಿಗೆ ಹೆಚ್ಚುವರಿ ಗುರಿ ನಿಗಧಿಪಡಿಸಲು ಇರುವ ತೊಡಕುಗಳೇನು ; ತೊಡಕುಗಳಿಲ್ಲವಾದರೆ ಹೆಚ್ಚುವರಿ ಗುರಿ ನಿಗಧಿಪಡಿಸದಿರಲು ಕಾರಣವೇನು ;

(ಇ) ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ನರೇಗಾ ಯೋಜನೆಗೆ ಸಂಬಂಧಿಸಿದಂತೆ ಬಿಡುಗಡೆ ಮಾಡಬೇಕಾದ ಅನುದಾನವೆಷ್ಟು ; ಯಾವ ಯಾವ ವರ್ಷಗಳಿಂದ ಎಷ್ಟೆಷ್ಟು ಅನುದಾನ ಬಾಕಿ ಇದೆ ; ಅನುದಾನ ಪಡೆಯಲು ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಅಲ್ಪಸಂಖ್ಯಾತರ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬ (೪೬) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೦೨೧ ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳು ಯಾವುವು ; ಈ ಯೋಜನೆಗಳಿಗೆ ನಿಗಧಿಪಡಿಸಿರುವ ಅನುದಾನವೆಷ್ಟು ;

(ಆ) ಬಿಡುಗಡೆಯಾದ ಅನುದಾನವೆಷ್ಟು ; ಖರ್ಚು ಮಾಡಿರುವ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅಲ್ಪಸಂಖ್ಯಾತರ ಇಲಾಖೆಯ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರವು ಯಾವ ಯಾವ ಅರೆ ಸರ್ಕಾರಿ ಸಂಸ್ಥೆಗಳನ್ನು ನಿಯೋಜಿಸಿದೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಇದುವರೆವಿಗೂ ಸರ್ಕಾರ/ಇಲಾಖೆಯಿಂದ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಈ) ಖರ್ಚು ಮಾಡಿರುವ ಅನುದಾನವೆಷ್ಟು ; ಸದರಿ ಸಂಸ್ಥೆಗಳಲ್ಲಿ ಖರ್ಚಾಗದೇ ಉಳಿದಿರುವ ಅನುದಾನವೆಷ್ಟು ? (ಮಾಹಿತಿ ನೀಡುವುದು)

## ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಘನತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭ (೫೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯು ಒಂದು ದೊಡ್ಡ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಗ್ರಾಮಗಳ ಘನತ್ಯಾಜ್ಯ ನಿರ್ವಹಣೆಗಾಗಿ ಬಿಡುಗಡೆಯಾದ ಹಣವೆಷ್ಟು ;

(ಇ) ಕಳೆದ ವರ್ಷ ರಾಜ್ಯದ ಎಷ್ಟು ಗ್ರಾಮಗಳಲ್ಲಿ ಈ ಘನತ್ಯಾಜ್ಯ ಸಂಸ್ಕರಣಾ ಘಟಕ/ನಿರ್ವಹಣೆಯ ವ್ಯವಸ್ಥೆ ಮಾಡಲಾಗಿದೆ ;

(ಈ) ಇನ್ನೂ ಎಷ್ಟು ಗ್ರಾಮಗಳಲ್ಲಿ ಘನತ್ಯಾಜ್ಯ ವಿಲೇವಾರಿ ಬಗ್ಗೆ ಕ್ರಮ ಕೈಗೊಳ್ಳಬೇಕಾಗಿದೆ ;

(ಉ) ಮುಂಬರುವ ದಿನಗಳಲ್ಲಿ ಇದೊಂದು ವಿಶೇಷ ಅಭಿಯಾನದ (Special Drive) ರೂಪದಲ್ಲಿ ಪ್ರಧಾನ ಮಂತ್ರಿ ಸ್ವಚ್ಛ ಭಾರತ ಅಭಿಯಾನದ ಅಡಿಯಲ್ಲಿ ತೆಗೆದುಕೊಂಡು ಸಾಧನೆ ಮಾಡಲು ಇರುವ ಸಮಸ್ಯೆಗಳೇನು ?

## ರಾಜ್ಯದೆಲ್ಲೆಡೆ ಚಿಕ್ಕಮಕ್ಕಳನ್ನು ಭಿಕ್ಷಾಟನೆಗೆ ಬಳಸಿಕೊಳ್ಳುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೮ (೪೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇವಸ್ಥಾನಗಳ ಸುತ್ತಮುತ್ತ, ರೈಲು ನಿಲ್ದಾಣ, ಬಸ್ಸು ನಿಲ್ದಾಣಗಳ ಹತ್ತಿರ ಹಾಗೂ ನಗರದ ಸಿಗ್ನಲ್‌ಗಳ ಬಳಿ ಹಲವಾರು ಚಿಕ್ಕ ಮಕ್ಕಳ ಹಾಗೂ ಮಕ್ಕಳನ್ನು ಮಡಿಲಲ್ಲಿ ಇಟ್ಟುಕೊಂಡು ಭಿಕ್ಷಾಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಿಕ್ಕ ಮಕ್ಕಳಿಗೆ ಮತ್ತು ಬರಿಸುವ ಔಷಧ ನೀಡಿ, ನಿದ್ರಿಸುವಂತೆ ಮಾಡಿ ಅವುಗಳನ್ನು ತೋರಿಸಿ, ಕರುಣೆ ಬರುವಂತೆ ಮಾಡಿ ಭಿಕ್ಷಾಟನೆ ನಡೆಸುತ್ತಾ ಮಕ್ಕಳ ಜೀವನದ ಜೊತೆ ಆಟವಾಡುವವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಇಲ್ಲಿಯವರೆಗೆ ಇಂತಹ ಎಷ್ಟು ಮಕ್ಕಳನ್ನು ರಕ್ಷಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿನ ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯ (೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜನರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು, ರಾಜ್ಯಾದ್ಯಂತ ಎಷ್ಟು ಘಟಕಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸ್ಥಾಪಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳೆಲ್ಲವೂ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ;

(ಇ) ಸದರಿ ನೀರಿನ ಘಟಕಗಳ ನಿರ್ವಹಣೆಯ ಹೊಣೆಯನ್ನು ಯಾರಿಗೆ ವಹಿಸಲಾಗಿದೆ ;

(ಈ) ದುರಸ್ಥಿಗೆ ಬಂದ ಯಂತ್ರಗಳನ್ನು ಕ್ಲುಪ್ತ ಸಮಯದೊಳಗೆ ದುರಸ್ಥಿ ಮಾಡದಿರುವ ಬಗ್ಗೆ ಹಲವಾರು ದೂರುಗಳಿದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದಲ್ಲಿರುವ ನಿಗಮ/ಮಂಡಳಿಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೦ (೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದಲ್ಲಿ ಎಷ್ಟು ನಿಗಮ/ಮಂಡಳಿಗಳು ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಆ) ಸದರಿ ನಿಗಮ/ಮಂಡಳಿಗಳು ಯಾವ ವರ್ಷದಿಂದ ಕಾರ್ಯಾರಂಭವಾಗಿರುತ್ತವೆ ; ಹಾಗೂ ಕಳೆದ ೦೩ ವರ್ಷಗಳಲ್ಲಿ ಸದರಿ ನಿಗಮ/ಮಂಡಳಿಗಳಿಗೆ ಒದಗಿಸಿದ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಸದರಿ ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಬಳಸಲಾಗುತ್ತಿದೆ ; ಮತ್ತು ಅವುಗಳು ಯಾವ ಹಂತದಲ್ಲಿವೆ ?

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯಕ್ರಮದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧ (೬೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಮಹಿಳಾ ಮತ್ತು ಮಕ್ಕಳ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ

ಸಮಾಲೋಚನಾ ಕೇಂದ್ರಗಳು, ವಿಶೇಷ ಚಿಕಿತ್ಸಾ ಘಟಕಗಳು, ಆಶ್ರಯ ಗೃಹಗಳು, ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳು ಹಾಗೂ ಕಾನೂನಿನ ನೆರವು ಮತ್ತು ಇತರೆ ಸೌಲಭ್ಯಗಳನ್ನು ಒಳಗೊಂಡಿರುವ ಇಲಾಖೆಯ ಎಲ್ಲಾ ಕಾರ್ಯಕ್ರಮಗಳನ್ನು ಪಾರದರ್ಶಕವಾಗಿ ಮಹಿಳೆಯರಿಗೆ ತಲುಪಿಸಲು ಸಹಾಯಕವಾಗುವಂತೆ ಮಹಿಳಾ ಸುರಕ್ಷತಾ ಪೋರ್ಟಲ್‌ನ್ನು ಪ್ರಾರಂಭಿಸಲಾಗಿದೆಯೇ ;

(ಆ) ಪ್ರಾರಂಭಿಸಿದ್ದಲ್ಲಿ, (ಜಿಲ್ಲಾವಾರು ಮಾಹಿತಿ ನೀಡುವುದು) ಪ್ರಾರಂಭಿಸದೇ ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ; ಈ ವಿಳಂಬಕ್ಕೆ ಕಾರಣವೇನು ?

## ಸ್ವಚ್ಛ ಭಾರತ್ ಅಭಿಯಾನದಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಶೌಚಾಲಯ ನಿರ್ಮಾಣದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨ (೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಭಾಗಗಳಲ್ಲಿ ಸಾಂಕ್ರಾಮಿಕ ರೋಗ ಹರಡುವುದನ್ನು ತಡೆಯಲು ಹಾಗೂ ನಿರ್ಮಲ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಬಚ್ಚಲುಗುಂಡಿ ನಿರ್ಮಾಣ ಯೋಜನೆಯು ರಾಜ್ಯದ ಎಷ್ಟು ಕುಟುಂಬಗಳಿಗೆ ತಲುಪಿದೆ ;

(ಆ) ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಈ ಯೋಜನೆಗೆ ಸರ್ಕಾರ ನೀಡುವ ಸಹಾಯಧನ ಎಷ್ಟು ಹಾಗೂ ಇಲ್ಲಿಯವರೆಗೆ ಸರ್ಕಾರ ಬಿಡುಗಡೆ ಮಾಡಿರುವ ಮೊತ್ತವೆಷ್ಟು ;

(ಈ) ಕೇಂದ್ರ ಸರ್ಕಾರದ ಸ್ವಚ್ಛ ಭಾರತ್ ಅಭಿಯಾನದಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಮನೆಗಳಿಗೆ ಶೌಚಾಲಯ ನಿರ್ಮಾಣ ಮಾಡಿಕೊಂಡಿರುವ ಕುಟುಂಬಗಳಿಗೂ ಈ ಯೋಜನೆ ಅನ್ವಯವಾಗುತ್ತದೆಯೇ ? (ಸಂಪೂರ್ಣ ವಿವರ ನೀಡುವುದು)

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩ (೬೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಇರುವ ವಿವಿಧ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಈ ಇಲಾಖೆಗೆ ಕಾಯ್ದಿರಿಸಿದ ಅನುದಾನವೆಷ್ಟು ;

(ಇ) ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಬಿಡುಗಡೆಗೊಳಿಸಿರುವ ಅನುದಾನದ ಮೊತ್ತವೆಷ್ಟು ;

(ಈ) ಇಲಾಖೆಯು ಅನುಷ್ಠಾನಗೊಳಿಸಿದ ಎಲ್ಲಾ ಯೋಜನೆಗಳು ಯಶಸ್ವಿಯಾಗಿವೆಯೇ ; ವಿಫಲವಾಗಿರುವ ಯೋಜನೆಗಳಾವುವು ಅದಕ್ಕೆ ಕಾರಣಗಳೇನು ;

(ಉ) ಈ ಎಲ್ಲಾ ಯೋಜನೆಗಳನ್ನು ಅನುಷ್ಠಾನಗೊಳಿಸುವಾಗ ಸರ್ಕಾರದ ನೀತಿ ನಿಯಮಗಳ ಅನುಸಾರ ರಚಿಸಿರುವ ಖರೀದಿ ಪ್ರಕ್ರಿಯೆಯ ಕಾಯ್ದೆಗಳನ್ನು ಪಾಲಿಸಲಾಗಿದೆಯೇ ? (ಎಲ್ಲಾ ಯೋಜನೆಗಳಿಗೆ ಸಂಬಂಧಿಸಿದಂತೆ ವಿವರ ನೀಡುವುದು)

## ರಾಜ್ಯ ಸರ್ಕಾರವು ಹೈನುಗಾರಿಕೆಗೆ ವಿನಿಯೋಗಿಸಿದ ಮೊತ್ತದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪ (೬೩) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹೈನುಗಾರಿಕೆಗೆ ಕೇಂದ್ರ ಸರ್ಕಾರವು ನೆರವು ನೀಡುತ್ತಿದೆಯೇ ;

(ಆ) ಕೇಂದ್ರದಿಂದ ಬಿಡುಗಡೆಯಾದ ಹಣವೆಷ್ಟು ; ವಿನಿಯೋಗಿಸಿದ ಮೊತ್ತವೆಷ್ಟು ;

(ಇ) ಪಶು ಇಲಾಖೆಯು ಸಿಬ್ಬಂದಿಗಳ ಕೊರತೆಯನ್ನು ಎದುರಿಸುತ್ತಿದೆಯೇ ;

(ಈ) ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೫ (೦೮) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಯಾವ ಯಾವ ಯೋಜನೆಯಡಿ ಅನುದಾನ ಬಿಡುಗಡೆ ಮಾಡಲಾಗಿದೆ ;

(ಆ) ಕಳೆದ ೩ ವರ್ಷಗಳಿಂದ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಯೋಜನೆಗಳ ಅಡಿಯಲ್ಲಿ ಜೈನ್, ಕ್ರಿಶ್ಚಿಯನ್ ಹಾಗೂ ಇತರೆ ಜನಾಂಗದವರಿಗೆ ಬಿಡುಗಡೆಯಾದ ಅನುದಾನವೆಷ್ಟು ? (ಯೋಜನೆವಾರು ಜನಾಂಗವಾರು ವಿವರ ನೀಡುವುದು)

## ಕಳೆದ ೩ ವರ್ಷಗಳಿಂದ ವಿಕಲಚೇತನರಿಗೆ ನೀಡಿದ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೬ (೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ವಿಜಯಪುರ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ವಿಕಲಚೇತನರಿಗಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೭ (೧೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ ; ಅವುಗಳಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳನ್ನು ಹೊಂದಿದೆ ;

(ಆ) ಅಂಗನವಾಡಿಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇದೆ ? (ತಾಲ್ಲೂಕುವಾರು ವಿವರ ನೀಡುವುದು)

## ಕೆ.ಎಸ್.ಆರ್.ಟಿ.ಸಿ ಹಾಗೂ ಇತರ ನಿಗಮಗಳಿಗೆ ಆಗಿರುವ ನಷ್ಟಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೮ (೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ಮಾರ್ಚ್ ೨೦೨೦ರ ನಂತರ ಕೆ.ಎಸ್.ಆರ್.ಟಿ.ಸಿ ಹಾಗೂ ಇತರ ನಿಗಮಗಳಿಗೆ ಆಗಿರುವ ನಷ್ಟಗಳೇನು ;

(ಆ) ಪ್ರತಿ ನಿಗಮದ ನಷ್ಟದ ವಿವರ ಒದಗಿಸುವುದು ;

(ಇ) ನಷ್ಟ ಭರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯ (೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇದುವರೆಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; (ವರ್ಷವಾರು ಜಿಲ್ಲಾವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಈ ಘಟಕಗಳ ನಿರ್ಮಾಣಕ್ಕೆ ಸರ್ಕಾರವು ಇದುವರೆಗೂ ಖರ್ಚು ಮಾಡಿರುವ ಹಣ ಎಷ್ಟು ; (ವಿವರ ನೀಡುವುದು)

(ಇ) ಸಾವಿರಾರು ಕೋಟಿ ಹಣ ಖರ್ಚು ಮಾಡಿ ಕುಡಿಯುವ ಶುದ್ಧ ನೀರಿನ ಘಟಕಗಳನ್ನು ನಿರ್ಮಾಣ ಮಾಡಿದಾಗ್ಯೂ ಅವುಗಳು ಅಧಿಕಾರಿ/ಸಿಬ್ಬಂದಿಗಳ ನಿರ್ಲಕ್ಷ್ಯದಿಂದ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಸಾರ್ವಜನಿಕರ ಆರೋಗ್ಯದ ಹಿತಿದೃಷ್ಟಿಯಿಂದ ನಿರ್ಮಾಣ ಮಾಡಿರುವ ಈ ಶುದ್ಧ ನೀರಿನ ಘಟಕಗಳನ್ನು ವ್ಯವಸ್ಥಿತವಾಗಿ ನಿರ್ವಹಿಸದಿರುವವರ ಮೇಲೆ ಸರ್ಕಾರ ಯಾವ ಕ್ರಮಕೈಗೊಂಡಿದೆ ; (ವಿವರ ನೀಡುವುದು)

(ಉ) ಸ್ಥಾಪನೆಯಾದ ದಿನದಿಂದ ಶುದ್ಧ ನೀರಿನ ಘಟಕಗಳು ಇದುವರೆಗೂ ಕಾರ್ಯಾರಂಭ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಜ್ಯದ್ಯಾಂತ ಈ ರೀತಿ ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ತಾಲ್ಲೂಕುವಾರು ಸ್ಪಷ್ಟ ಮಾಹಿತಿ ಒದಗಿಸುವುದು)

## ಬಸ್ ಚಾಲನೆ ವೇಳೆ ಚಾಲಕರು ಮೊಬೈಲ್ ಫೋನ್ ಬಳಸುತ್ತಿರುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦ (೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜುಲೈ–೨೦೨೦ ರಿಂದ ಡಿಸೆಂಬರ್ ಅಂತ್ಯದವರೆಗೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಚಾಲಕರು ಬಸ್ ಚಾಲನೆ ವೇಳೆ ತಮ್ಮ ಮೊಬೈಲ್ ಫೋನ್ ಬಳಕೆ ಮಾಡಿ ಕರ್ತವ್ಯ

ಲೋಪ ಎಸಗಿರುವ ಎಷ್ಟು ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ ; (ಡಿಪೋವಾರು ಚಾಲಕರ ಹೆಸರು ಸಹಿತ ವಿವರ ನೀಡುವುದು)

(ಆ) ಈ ರೀತಿಯ ಕರ್ತವ್ಯ ಲೋಪ ಎಸಗಿರುವ ಚಾಲಕರ ವಿರುದ್ಧ ಸಂಸ್ಥೆ ಯಾವ ನಿಯಮದಡಿ ಏನು ಕ್ರಮ ಕೈಗೊಳ್ಳಲಿದೆ ;

(ಇ) ಬಸ್‌ನಲ್ಲಿ ಪ್ರಯಾಣಿಸುವ ಪ್ರಯಾಣಿಕರ ಜವಾಬ್ದಾರಿ ಚಾಲಕರ ಮೇಲಿದ್ದು, ಚಾಲಕರು ಈ ರೀತಿ ಮೊಬೈಲ್ ಫೋನ್ ಬಳಕೆ ಮಾಡಿ ಪ್ರಯಾಣಿಕರ ಜೀವನದ ಜೊತೆ ಚೆಲ್ಲಾಟ ಆಡುವ ಈ ಉದ್ದಟತನವನ್ನು ಕೊನೆಗಾಣಿಸುವ ಅಗತ್ಯವಿದ್ದು, ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ;

(ಈ) ಮೇಲ್ಕಂಡ ಅವಧಿಯಲ್ಲಿ ಪತ್ತೆಹಚ್ಚಲಾದ ಪ್ರಕರಣಗಳಲ್ಲಿ ಎಷ್ಟು ಜನ ಚಾಲಕರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ಡಿಪೋವಾರು ಚಾಲಕರ ಹೆಸರು ಸಹಿತ ವಿವರ ನೀಡುವುದು) ಕ್ರಮ ಕೈಗೊಳ್ಳದೇ ಇದ್ದಲ್ಲಿ ಕಾರಣಗಳೇನು ; ಎಷ್ಟು ಸಮಯದಲ್ಲಿ ಅಂತಹ ಚಾಲಕರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ;

(ಉ) ಚಾಲಕರ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಹಿರಿಯ ಅಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿರುವುದು ಅಥವಾ ಚಾಲಕರ ಜೊತೆ ಶಾಮೀಲಾಗಿ ಕ್ರಮ ಕೈಗೊಳ್ಳದೇ ಇರುವ ಸಾಧ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧ (೩೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಇಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕೇಂದ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ಕಾರ ನೀಡುತ್ತಿರುವ ಗೌರವ ಧನ ಎಷ್ಟು ; ಗೌರವ ಧನದ ಜೊತೆಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳು ಯಾವುವು ;

(ಈ) ಪ್ರತಿ ತಿಂಗಳು ಸಮಯಕ್ಕೆ ಸರಿಯಾಗಿ ಗೌರವ ಧನ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಸಮಯಕ್ಕೆ ಸರಿಯಾಗಿ ಗೌರವ ಧನ ಪಾವತಿಸಲು ಕೈಗೊಂಡಿರುವ ಕ್ರಮಗಳೇನು ?

## ಪಶುಸಂಗೋಪನೆ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨ (೦೧) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯-೨೦ ಹಾಗೂ ೨೦೨೦-೨೧ನೇ ಸಾಲಿನಲ್ಲಿ ಪಶುಸಂಗೋಪನೆ ಅಭಿವೃದ್ಧಿಗೆ ಘೋಷಿಸಿದ ಹಣವೆಷ್ಟು; ಆ ಪೈಕಿ ಬಿಡುಗಡೆಯಾದ ಹಾಗೂ ಖರ್ಚಾದ ಹಣವೆಷ್ಟು;

(ಆ) ಹಸು, ಹಂದಿ, ಕುರಿ ಆಡು ಮೊಲ ಸಾಕಾಣಿಕೆ ಮತ್ತು ಕುಕ್ಕಟೋದ್ಯಮ ಇತ್ಯಾದಿಗಳಿಗೆ ಕಳೆದ ಎರಡು ವರ್ಷಗಳಲ್ಲಿ ಖರ್ಚಾದ ಹಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಸು ಸತ್ತರೇ ಸಿಗುವ ಪರಿಹಾರ ಎಮ್ಮೆ ಸತ್ತರೆ ಸಿಗುವುದಿಲ್ಲ ಎನ್ನುವ ರಾಜ್ಯದ ಜಾನುವಾರು ಸಾಕುವವರ ಕೂಗು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಗ್ರಾಮೀಣ ಪ್ರದೇಶದ ರೈತರಿಗೆ ಮತ್ತು ನಿರುದ್ಯೋಗಿ ಯುವಕರಿಗೆ ಪಶುಸಂಗೋಪನೆಯ ತರಬೇತಿ ಮತ್ತು ಸಹಾಯಧನ ಮುಂತಾದ ಪ್ರೋತ್ಸಾಹ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ ?

## ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳಲ್ಲಿ ಉತ್ತಮ ಉಪಹಾರ ಗೃಹ ಮತ್ತು ಶೌಚಾಲಯಗಳ ವ್ಯವಸ್ಥೆ ಕಲ್ಪಿಸುವ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೩ (೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳಲ್ಲಿ ಅನೇಕ ಕಡೆ ಉತ್ತಮ ಉಪಹಾರ ಗೃಹ ಮತ್ತು ಶೌಚಾಲಯಗಳ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಬಸ್ ನಿಲ್ದಾಣಗಳಲ್ಲಿರುವ ಶೌಚಾಲಯಗಳಲ್ಲಿ ಸಾರ್ವಜನಿಕರಿಂದ ಶುಲ್ಕ ಪಡೆದರೂ ಸ್ವಚ್ಛತೆಯನ್ನು ಕಾಪಾಡುತ್ತಿಲ್ಲದಿರುವುದರಿಂದ ಖಾಸಗಿಯವರಿಗೆ ವಹಿಸಿ ಸ್ವಚ್ಛತೆಯನ್ನು ಕಾಪಾಡುವ ವ್ಯವಸ್ಥೆ ಮಾಡಲಾಗುವುದೆ ?

## ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಶೆಟ್ಟಿಗೆರೆ ಗ್ರಾಮ ಪಂಚಾಯಿತಿಯ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪ (೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಶೆಟ್ಟಿಗೆರೆ ಗ್ರಾಮ ಪಂಚಾಯಿತಿಗೆ ಕಳೆದ ೩ ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು ; ಈ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಉಪಯೋಗಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಶೆಟ್ಟಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಎಷ್ಟು ಕಾಮಗಾರಿಗಳನ್ನು ನಿರ್ವಹಿಸಿದೆ ; (ಎಲ್ಲಾ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಪಂಚಾಯಿತಿ ವ್ಯಾಪ್ತಿಯಲ್ಲಿ ಉದ್ಯೋಗ ಖಾತರಿ ಯೋಜನೆಯಡಿ ಎಷ್ಟು ಜನ ಜಾಬ್‌ಕಾರ್ಡ್‌ಗಳನ್ನು ಹೊಂದಿದ್ದಾರೆ ? (ಹೆಸರುಗಳ ಸಮೇತ ಸಂಪೂರ್ಣ ವಿವರ ನೀಡುವುದು)

# ಗ್ರಾಮ ಪಂಚಾಯತಿಗಳಲ್ಲಿ ಖಾಸಗಿ/ಸರ್ಕಾರಿ ಸ್ವತ್ತನ್ನು ಅತಿಕ್ರಮಿಸಿಕೊಂಡಿರುವ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೫ (೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನೇಕ ಗ್ರಾಮ ಪಂಚಾಯಿತಿಗಳ ಅಧೀನದಲ್ಲಿರುವ ಗ್ರಾಮಗಳಲ್ಲಿ ಸರ್ಕಾರಿ ಜಮೀನುಗಳು/ಸ್ವತ್ತನ್ನು ಖಾಸಗಿಯವರು ಅತಿಕ್ರಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮವೇನು ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ಅನೇಕ ಖಾಸಗಿ ಆಸ್ತಿಗಳನ್ನು ಗ್ರಾಮ ಪಂಚಾಯಿತಿಗಳಿಂದ ಒತ್ತುವರಿ ಮಾಡಿಕೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮ ಪಂಚಾಯತಿವಾರು ವಿವರ ನೀಡುವುದು)

(ಇ) ಚಾಮರಾಜನಗರ ತಾಲ್ಲೂಕು, ಹೆಬ್ಬಸೂರು ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ನಿವೇಶನ ಸಂ:೧೨೪ರ ಸ್ವತ್ತನ್ನು ಗ್ರಾಮ ಪಂಚಾಯಿತಿ ವತಿಯಿಂದ ಅತಿಕ್ರಮಿಸಿಕೊಂಡು ಅಕ್ರಮ ಕಟ್ಟಡ ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; ಇಲ್ಲದ್ದಿದಲ್ಲಿ, ಈಗಾಗಲೇ ಗ್ರಾಮಪಂಚಾಯಿತಿ ನಿವೇಶನ ಸಂ.೧೨೪ ರ ಸ್ವತ್ತನ್ನು ಗ್ರಾಮ ಪಂಚಾಯಿತಿ ವತಿಯಿಂದ ಅತಿಕ್ರಮಿಸಿಕೊಂಡು ಅಕ್ರಮ ಕಟ್ಟಡ

ನಿರ್ಮಾಣ ಮಾಡಿರುವ ಕುರಿತು ಸರ್ಕಾರಕ್ಕೆ ನಿವೇಶನದ ಮಾಲೀಕರು ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮವನ್ನು ಸ್ಥಳೀಯ ಆಡಳಿತ ಮಾಡದೇ ಇರುವ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಹಿರಿಯ ನಾಗರಿಕರ ಮತ್ತು ತಂದೆ ತಾಯಿಯರ ಪಾಲನೆ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೩೬ (೨೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಹಿರಿಯ ನಾಗರಿಕರ ಮತ್ತು ತಂದೆ ತಾಯಿಯವರ ಪಾಲನೆ-ಪೋಷಣೆ ಮತ್ತು ಕಲ್ಯಾಣ ಅಧಿನಿಯಮ ೨೦೦೭ ರ ಅನ್ವಯ ವೃದ್ಧಾಶ್ರಮಗಳ ನಿರ್ವಹಣೆಗೆ ಯಾವುದಾದರೂ ಕಾರ್ಯ ಯೋಜನೆ ರೂಪಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ವೃದ್ಧಾಶ್ರಮಗಳ ಸಂಖ್ಯೆ ಎಷ್ಟು; ಖಾಸಗಿ, ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ ವೃದ್ಧಾಶ್ರಮಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ವೃದ್ಧಾಶ್ರಮಗಳ ಅಸಲಿ ಸ್ಥಿತಿಗತಿಗಳ ಕುರಿತು ವಾರ್ಷಿಕವಾರು 3rd Party ಅಥವಾ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಯ ವತಿಯಿಂದ ಅಧ್ಯಯನ/ತಪಾಸಣೆ ನಡೆಸುವ ಕಾರ್ಯಕ್ರಮಗಳು ರೂಪಿಸಲ್ಪಟ್ಟಿವೆಯೇ ; (ವಿವರ ನೀಡುವುದು)

(ಈ) ಹಿರಿಯ ನಾಗರಿಕರ ಮತ್ತು ತಂದೆ-ತಾಯಿಯವರ ಪಾಲನೆ-ಪೋಷಣೆ ಮತ್ತು ಕಲ್ಯಾಣ ಅಧಿನಿಯಮ ೨೦೦೭ರ ಅನುಚ್ಛೇದ ೧೯ರ ಅನ್ವಯ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವೃದ್ಧಾಶ್ರಮಗಳನ್ನು ಸ್ಥಾಪಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು ? (ವಿವರ ನೀಡುವುದು)

## ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ಶೌಚಾಲಯಗಳ ನಿರ್ಮಾಣದ ಕುರಿತು

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :-**

೩೭ (೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ವಚ್ಛ ಭಾರತ ಯೋಜನೆಯಡಿ ಸರ್ಕಾರದಿಂದ ಕಳೆದ ೩ ವರ್ಷಗಳಲ್ಲಿ ರಾಜ್ಯಕ್ಕೆ ಬಂದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ನಿರ್ಮಾಣಗೊಂಡ ಒಟ್ಟು ಶೌಚಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲೆ ಹಾಗೂ ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಗದಗ ಜಿಲ್ಲೆಯಲ್ಲಿ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ ; (ಗ್ರಾಮವಾರು ಮಾಹಿತಿ ನೀಡುವುದು)

(ಈ) ಇಲ್ಲಿಯುವರಿಗೆ ರಾಜ್ಯದಲ್ಲಿ ಬಹಿರ್ದೆಸೆ ಮುಕ್ತವೆಂದು ಘೋಷಿಸಲಾಗಿರುವ ಸಂಖ್ಯೆ ಎಷ್ಟು ?(ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮಗಳ ವಿವರವಾದ ಮಾಹಿತಿ ನೀಡುವುದು)

## ತಾಯಿಯ ಮಡಿಲಿನಿಂದ, ತೊಟ್ಟಿಲವರೆಗೆ ಯೋಜನೆ ಕುರಿತು

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೮ (೨೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ವತಿಯಿಂದ ತಾಯಿಯ ಮಡಿಲಿನಿಂದ-ತೊಟ್ಟಿಲವರೆಗೆ ಎಂಬ ತಾಯಿ-ಮಗು ಹಾರೈಕೆಯ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ದೊರೆತಿರುವ ಅನುದಾನವೆಷ್ಟು; ಈ ಅನುದಾನವನ್ನು ಯಾವ ರೀತಿಯಲ್ಲಿ ಸದುಪಯೋಗ ಮಾಡಿಕೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇತ್ತೀಚಿನ ಕೋವಿಡ್-೧೯ ಪಿಡುಗು ಹರಡುವಿಕೆಯಿಂದ Immunization, Nutrition ಮತ್ತು Health ಯೋಜನೆಗಳ ಅನುಷ್ಠಾನ ನೆನೆಗುದಿಗೆ ಬಿದ್ದು, ತಾಯಿ-ಮಗು ಹಾರೈಕೆ ಕ್ರಮಗಳಿಗೆ ಹಿನ್ನಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕಾರ್ಯಕ್ರಮಗಳನ್ನು ಸಕಾಲಿಕವಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ? (ವಿವರ ನೀಡುವುದು)

## ಸ್ವಚ್ಛ ಭಾರತ್ (ಗ್ರಾಮೀಣ) ಅಭಿಯಾನ ಮತ್ತು 'ಬಯಲು ಬಹಿರ್ದೆಶೆ ಮುಕ್ತ' ಗ್ರಾಮಗಳು ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೯ (೨೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸ್ವಚ್ಛ ಭಾರತ್ (ಗ್ರಾಮೀಣ) ಅಭಿಯಾನವನ್ನು ಪ್ರಾರಂಭಿಸುವ ಮುನ್ನ ಕೈಗೊಂಡಿರುವ ಒಟ್ಟಾರೆ ಗ್ರಾಮೀಣ ಸ್ವಚ್ಛತೆ ಎಷ್ಟು; ಮತ್ತು ಈ ಅಭಿಯಾನವನ್ನು ಪ್ರಾರಂಭಿಸಿದ ನಂತರ ಇದುವರೆವಿಗೂ ಸಾಧಿಸಲಾಗಿರುವ ಪ್ರಗತಿ ಎಷ್ಟು; (ಜಿಲ್ಲಾವಾರು ಮತ್ತು ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಪ್ರಸ್ತುತ ರಾಜ್ಯದ ಗ್ರಾಮಾಂತರ ಪ್ರದೇಶದಲ್ಲಿ ಈ ಅಭಿಯಾನ ಅಡಿಯಲ್ಲಿ ದಿನಾಂಕ: ೦೨–೧೧–೨೦೨೦ರಂತೆ ಎಷ್ಟು ಮನೆಗಳಿಗೆ ಶೌಚಾಲಯ ನಿರ್ಮಿಸಿಕೊಡಲಾಗಿದೆ ;

(ಇ) ರಾಜ್ಯಕ್ಕೆ 'ಬಯಲು ಬಹಿರ್ದೆಶೆ ಮುಕ್ತ' ಸ್ವಚ್ಛತೆ ಕಾರ್ಯಕ್ರಮಗಳಲ್ಲಿ ನಿಗಧಿಪಡಿಸಿದ ಗುರಿಯೆಷ್ಟು ; ಮತ್ತು ಯಾವ ಅವಧಿಯೊಳಗೆ ರಾಜ್ಯದಲ್ಲಿ ಈ ಅಭಿಯಾನದ ಅಡಿ ಶೇ.೧೦೦ ರಷ್ಟು 'ಬಯಲು ಬಹಿರ್ದೆಶೆ ಮುಕ್ತ' ಸ್ವಚ್ಛತೆಯನ್ನು ಸಾಧಿಸಲಾಗುವುದು;

(ಈ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ನಿರ್ಮಿಸಲಾದ ಶೌಚಾಲಯಗಳೆಷ್ಟು; (ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ 'ಬಯಲು ಬಹಿರ್ದೆಶೆ ಮುಕ್ತ' ಗ್ರಾಮಗಳೆಂದು ಘೋಷಿತವಾಗಿರುವ ಗ್ರಾಮಗಳಲ್ಲಿ ಶೌಚಾಲಯ ನಿರ್ಮಾಣದ ಬಗ್ಗೆ ಸಮೀಕ್ಷೆ/ಗಣತಿಯು ವಿವರವನ್ನು ಜಿಲ್ಲಾವಾರು ಒದಗಿಸುವುದು ?

# ಅಲ್ಪ ಸಂಖ್ಯಾತರ ಸಮುದಾಯಗಳ ಅಭಿವೃದ್ಧಿಗೆ ರೂಪಿಸಿರುವ ಯೋಜನೆಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೦ (೨೪) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿವಿಧ ಅಲ್ಪಸಂಖ್ಯಾತರ ಸಮುದಾಯಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಅಲ್ಪಸಂಖ್ಯಾತರ ಅಭಿವೃದ್ಧಿಗೆ ರೂಪಿಸಿರುವ ಯೋಜನೆಗಳು ಯಾವುವು;

(ಇ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಯಡಿ ಅಲ್ಪಸಂಖ್ಯಾತರ ಅಭಿವೃದ್ಧಿಗೆ ನಿಗದಿಪಡಿಸಿದ ಅನುದಾನವೆಷ್ಟು ಮತ್ತು ಖರ್ಚು ಮಾಡಿರುವ ಅನುದಾನವೆಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರದ Pre-Metric, Post-Metric Merit-cum scholarships ಯೋಜನೆಯಡಿ ರಾಜ್ಯ ಸರ್ಕಾರ ಪಡೆದಿರುವ ಅನುದಾನವೆಷ್ಟು;

(ಉ) ಉನ್ನತ ಶಿಕ್ಷಣ ಅಭ್ಯಸಿಸುವ ವಿದ್ಯಾರ್ಥಿಗಳಿಗೆ Post-Metric scholarship ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿಳಂಬವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ರಾಜ್ಯ ರಸ್ತೆ ಸಾರಿಗೆ ನಿಗಮಗಳು/ಸಿಬ್ಬಂದಿ ವರ್ಗದವರು ಮತ್ತು ಎಲೆಕ್ಟ್ರಿಕ್ ಬಸ್ಸುಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) :–**

೪೧ (೪೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರಿಗೆಗೆ ಸಂಬಂಧಿಸಿದಂತೆ ಎಷ್ಟು ನಿಗಮಗಳಿವೆ; ಅವುಗಳಲ್ಲಿ ಸುಸ್ಥಿತಿಯಲ್ಲಿ ಸಂಚಾರಿಸುತ್ತಿರುವ ಬಸ್ಸುಗಳ ಸಂಖ್ಯೆ ಎಷ್ಟು; (ನಿಗಮವಾರು ಮಾಹಿತಿ ನೀಡುವುದು) ಆಯಾ ನಿಗಮಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಚಾಲಕರು ಮತ್ತು ನಿರ್ವಾಹಕರು ಸೇರಿದಂತೆ ಎಷ್ಟು ಜನ ಸಿಬ್ಬಂದಿ ವರ್ಗದವರಿದ್ದಾರೆ; (ಶ್ರೇಣಿವಾರು ಮಾಹಿತಿ ನೀಡುವುದು)

(ಆ) ಇತ್ತೀಚಿಗೆ ಸಾರಿಗೆ ನೌಕರರು ವೇತನ ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ಕರ್ತವ್ಯಕ್ಕೆ ಹಾಜರಾಗದೆ ಮುಷ್ಕರ ನಡೆಸಿದ್ದರ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ; ಸಾರಿಗೆ ನೌಕರರ ಬೇಡಿಕೆಗಳನ್ನು ಈಡೇರಿಸುವಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರ ಎಲೆಕ್ಟ್ರಿಕ್ ಬಸ್ಸುಗಳನ್ನು ಓಡಿಸಲು ಯೋಜನೆ ರೂಪಿಸಿದೆಯೇ ; ಅವುಗಳನ್ನು ತಯಾರಿಸಿರುವ ಕಂಪನಿಗಳು ಯಾವುವು; ಅವುಗಳನ್ನು ಖರೀದಿಸಿ ಸಾರಿಗೆ ನಿಗಮಗಳಿಗೆ ಒದಗಿಸಲು ಮುಂದೆ ಬಂದಿರುವ ಖಾಸಗಿ ಕಂಪನಿಗಳು ಯಾವುವು; ಇವುಗಳ ರೂಪರೇಷೆಯಲ್ಲಿ ಕೇಂದ್ರ ಸರ್ಕಾರ ಎಷ್ಟು ಅನುದಾನ ಒದಗಿಸಲಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕೊಡಗು ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆ ತುಂಬುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೪೨(೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳಿವೆ; ಜಿಲ್ಲೆಗೆ ಮಂಜೂರಾಗಿರುವ ಹಾಗೂ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಜಿಲ್ಲೆಯಲ್ಲಿ ಹಲವಾರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹೆಚ್ಚುವರಿ ಪ್ರಭಾರದ ಜವಾಬ್ದಾರಿ ಇರುವುದಿರಂದ ಗ್ರಾಮ ಪಂಚಾಯಿತಿಗಳ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ತುಂಬಲಾಗುವುದು?

## MGNAREGA ಕಾಮಗಾರಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೩ (೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ MGNAREGA ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಯಿತು; ಇದರ ಧ್ಯೆಯೋದ್ಧೇಶಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿ ತೆಗೆದುಕೊಳ್ಳಬಹುದಾದ ಕಾಮಗಾರಿಗಳು ಯಾವುವು; ಇವುಗಳಲ್ಲಿ ಕೂಲಿ ಮತ್ತು ಸಾಮಗ್ರಿ ಅನುಪಾತ ಎಷ್ಟು ; (ಇಲಾಖಾವಾರು, ಅನುಷ್ಠಾನ ಏಜೆನ್ಸಿವಾರು, ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯಡಿ ಯಾವುದಾದರೂ ನಿಧಿಗಳನ್ನು ಸ್ಥಾಪಿಸಲಾಗಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಯೋಜನೆಯಡಿ ಕೇಂದ್ರ ಸರ್ಕಾರವು ಕಳೆದ ೩ ವರ್ಷಗಳಿಂದ ಎಷ್ಟು ಹಣ ಬಿಡುಗಡೆ ಮಾಡಿದೆ ; ಬಿಡುಗಡೆಯಾಗಬೇಕಾಗಿರುವ ಬಾಕಿ ಹಣವೆಷ್ಟು ; (ವಿವರವಾದ ಮಾಹಿತಿ ಕೊಡುವುದು)

(ಉ) ಸದರಿ ಯೋಜನೆಯನ್ನು ಕಾರ್ಯಗತಗೊಳಿಸಲು ರಾಜ್ಯ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಪಶುಸಂಗೋಪನೆ ಇಲಾಖೆಯಲ್ಲಿರುವ ಯೋಜನೆಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೪ (೪೨) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನೆ ಇಲಾಖೆ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ಒದಗಿಸುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಯೋಜನಾವಾರು ವಿವರವಾದ ಮಾಹಿತಿ ನೀಡುವುದು)

(ಇ) ಪಶುಸಂಗೋಪನೆ ಇಲಾಖೆ ಅಧೀನದಲ್ಲಿ ಎಷ್ಟು ನಿಧಿಗಳು ಇವೆ; ಇದ್ದರೆ, ಖರ್ಚು ಮಾಡಲು ಇರುವ ಮಾರ್ಗಸೂಚಿಗಳಾವುವು; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ಹಾಗೂ ಉಳಿದಿರುವ ಹಣವೆಷ್ಟು;

(ಈ) ಕಳೆದ ೩ ವರ್ಷಗಳಿಂದ ಭಾರತ ಸರ್ಕಾರವು ಸದರಿ ಇಲಾಖೆಗೆ ನೀಡುತ್ತಿರುವ ಸಹಾಯ /ಪ್ರೋತ್ಸಾಹ ಧನವೆಷ್ಟು? (ವಿವರವಾದ ಮಾಹಿತಿ ನೀಡುವುದು)

## ಮಸೀದಿಗಳ ಧಾರ್ಮಿಕ ಗುರುಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೫ (೩೮) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಸೀದಿಗಳಲ್ಲಿ ಧಾರ್ಮಿಕ ಗುರುಗಳಾಗಿ ಕಾರ್ಯ ನಿರ್ವಹಿಸುತ್ತಿರುವ ಅನ್ಯದೇಶದ/ಹೊರ ರಾಜ್ಯದ ಮೌಲ್ವಿ/ ಪೇಷುಮಾಮ್ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಮಸೀದಿಗಳಲ್ಲಿ ಪ್ರಸ್ತುತ ಇರುವ ರೋಹಿಂಗ್ಯ/ಬಾಂಗ್ಲಾದೇಶಿ ಮುಸ್ಲಿಂಮರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಮಸೀದಿಗಳಿಂದ ಸರ್ಕಾರಕ್ಕೆ ಸಂಗ್ರಹವಾಗುವ ತೆರಿಗೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮಸೀದಿಗಳಲ್ಲಿ ಹೊರ ರಾಜ್ಯ ಮತ್ತು ಹೊರ ದೇಶದಿಂದ ಬರುವ ಮುಸ್ಲಿಂಮರಿಗೆ ವಾಸ್ತವ್ಯಕ್ಕೆ ಅವಕಾಶ ಇದೆಯೇ ; ಮಸೀದಿಗಳನ್ನು ಗೆಸ್ಟ್ ಹೌಸ್ ರೀತಿಯಲ್ಲಿ ಬಳಸಬಹುದೇ; ಈ ರೀತಿಯ ಅಕ್ರಮ ವಾಸ್ತವ್ಯದಿಂದ ಮಸೀದಿಗಳು ಕಾನೂನು ಬಾಹಿರ ಕೃತ್ಯಗಳಿಗೆ ಬಳಕೆಯಾಗುತ್ತಿರುವ ಕುರಿತು ಸರ್ಕಾರದ ನಿಲುವೇನು?

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೬ (೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಮುಖಾಂತರ ರಾಜ್ಯದ ಎಷ್ಟು ಹಳ್ಳಿಗಳಿಗೆ ರಸ್ತೆ ಕಲ್ಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಗೆ ಕೇಂದ್ರ ಸರ್ಕಾರವು ಎಷ್ಟು ಅನುದಾನ ನೀಡಿದೆ; ಈ ಮೊತ್ತದಲ್ಲಿ ಎಷ್ಟು ಮೊತ್ತವನ್ನು ಬಳಸಲಾಗಿದೆ ; ಬಳಸಲಾಗದೆ ಹಿಂತಿರುಗಿಸಿದ ಮೊತ್ತವೆಷ್ಟು ;

(ಇ) ಕಳೆದ ೩ ವರ್ಷಗಳ ಅವಧಿಯಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಮುಖಾಂತರ ಎಷ್ಟು ಕಿಲೋ ಮೀಟರ್ ರಸ್ತೆಯ ನಿರ್ಮಾಣವಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ವಕ್ಫ್ ಬೋರ್ಡ್ ವತಿಯಿಂದ ಸಮುದಾಯದ ಅಭಿವೃದ್ಧಿ ಕಾರ್ಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೭ (೪೦) ಮಾನ್ಯ ಪಶು ಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಕ್ಫ್ ಬೋರ್ಡ್ ವತಿಯಿಂದ ಮುಸ್ಲಿಂ ಸಮುದಾಯದ ಅಭಿವೃದ್ಧಿಗೆ ಹಮ್ಮಿಕೊಂಡಿರುವ ಯೋಜನೆಗಳು ಯಾವುವು ;

(ಆ) ವಕ್ಫ್ ಬೋರ್ಡ್‌ಗೆ ಕಳೆದ ೩ ವರ್ಷಗಳಿಂದ ಸರ್ಕಾರದಿಂದ ನೀಡಲಾಗಿರುವ ಅನುದಾನವೆಷ್ಟು; ಸದರಿ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಉಪಯೋಗಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಬಿದಾಯಿ ಯೋಜನೆಯಡಿ ೨೦೧೯-೨೦೨೦ರ ಸಾಲಿನಲ್ಲಿ ವೆಚ್ಚ ಮಾಡಿದ ಮೊತ್ತವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಶಾಲಾ ಪೂರ್ವ ಮಕ್ಕಳ ಊಟದ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೪೮ (೩೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ಪೂರ್ವ ಮಕ್ಕಳ ಊಟದ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಮೊತ್ತವೆಷ್ಟು ; ರಾಜ್ಯಾದ್ಯಂತ ಈ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಾಲಾ ಪೂರ್ವ ಮಕ್ಕಳ ಊಟದ ಯೋಜನೆಯ ಅನ್ವಯ ಮಕ್ಕಳಿಗೆ ಯಾವ ರೀತಿಯ ಆಹಾರ ವಿತರಿಸಲಾಗುತ್ತದೆ ;

(ಇ) ರಾಜ್ಯದ ಮಕ್ಕಳ ಅಪೌಷ್ಠಿಕತೆಯ ಪ್ರಮಾಣ ಕಡಿಮೆ ಮಾಡಲು ಕೈಗೊಂಡ ಕ್ರಮಗಳೇನು ?

# ಮದರಸಗಳಲ್ಲಿನ ಧಾರ್ಮಿಕ ಶಿಕ್ಷಣದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೯ (೩೭) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದರಸಗಳಲ್ಲಿನ ಧಾರ್ಮಿಕ ಶಿಕ್ಷಣವನ್ನು ಎಸ್.ಎಸ್.ಎಲ್.ಸಿ.ಗೆ ತತ್ಸಮಾನ ಎಂದು ಪರಿಗಣಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಇದರಿಂದಾಗಿ ಸಮಾಜದ ಒಂದು ವರ್ಗದ ಜನರನ್ನು ಪ್ರತ್ಯೇಕವೆಂದು ಪರಿಗಣಿಸಿದಂತಾಗಲಿಲ್ಲವೇ; ಅವರನ್ನು ಸಾಮಾನ್ಯ ಶಿಕ್ಷಣದಿಂದ ಮತ್ತು ದೇಶದ ಇತಿಹಾಸ ತಿಳಿದುಕೊಳ್ಳುವುದಕ್ಕೆ ಅಡ್ಡಿ ಉಂಟು ಮಾಡಿದಂತಾಗಲಿಲ್ಲವೇ ;

(ಆ) ಮದರಸಗಳಲ್ಲಿನ ಧಾರ್ಮಿಕ ಶಿಕ್ಷಣದಲ್ಲಿ ಯಾವ ಯಾವ ವಿಷಯಗಳ ಕುರಿತು ಬೋಧನೆ ಮಾಡಲಾಗುತ್ತದೆ ; ಮದರಸ ಶಿಕ್ಷಣಕ್ಕೆ ಸರ್ಕಾರ ಯಾವ ಯಾವ ರೀತಿಯ ಸೌಲಭ್ಯವನ್ನು ನೀಡುತ್ತದೆ;

(ಇ) ಮುಂದಿನ ದಿನಗಳಲ್ಲಿ ಧಾರ್ಮಿಕ ಶಿಕ್ಷಣವನ್ನು ಉನ್ನತ ಶಿಕ್ಷಣ ಹಾಗೂ ಸರ್ಕಾರದ ನೇಮಕಾತಿಗಾಗಿ ನಡೆಸಲಾಗುವ ಪರೀಕ್ಷೆಗಳಲ್ಲೂ ಪರಿಗಣಿಸಿ ಅಳವಡಿಸಿಕೊಳ್ಳುವಂತೆ ಸಮಾಜದ ಒಂದು ವರ್ಗ ಒತ್ತಡ ತಂದರೆ ಸರ್ಕಾರದ ನಿಲುವೇನುಮ ;

(ಈ) ಮದರಸಗಳಲ್ಲಿನ ಧಾರ್ಮಿಕ ಶಿಕ್ಷಣವನ್ನು ಎಸ್.ಎಸ್.ಎಲ್.ಸಿ ಗೆ ತತ್ಸಮಾನ ಎಂದು ಪರಿಗಣಿಸಿದ್ದಲ್ಲಿ ಆ ಸಮಾಜ ಪಡೆಯುವ ಶಿಕ್ಷಣವೇ ಶ್ರೇಷ್ಠ, ಸಾಮಾನ್ಯ ಶಿಕ್ಷಣಕ್ಕೆ ಬೆಲೆ ಇಲ್ಲ ಎಂದು ಸಮಾಜದ ಇತರ ವರ್ಗ ಭಾವಿಸಿದ್ದಲ್ಲಿ ಸರ್ಕಾರದ ನಿಲುವೇನು;

(ಉ) ಮದರಸಗಳನ್ನು ಸಾಮಾನ್ಯ ಶಿಕ್ಷಣ ನೀಡುವ ಶಾಲೆಗಳಾಗಿ ಪರಿವರ್ತಿಸುವ ಕುರಿತು ಸರ್ಕಾರದ ನಿಲುವೇನು ?

## ನಂಜನಗೂಡು ನೂತನ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಲ್ಲಿ ಶೌಚಾಲಯ ಸೌಲಭ್ಯದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೦ (೪೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂಜನಗೂಡು ಪಟ್ಟಣದ ನೂತನ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಲ್ಲಿ ನಿರ್ಮಿಸಿರುವ ಶೌಚಾಲಯವನ್ನು ಬಂದ್ ಮಾಡಿರುವುದರಿಂದ (ಮುಚ್ಚಿರುವುದರಿಂದ) ದಿನನಿತ್ಯ ಪ್ರಯಾಣಿಸುವ ನೂರಾರು ಸಾರ್ವಜನಿಕ ಪ್ರಯಾಣಿಕರಿಗೆ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ನಂಜನಗೂಡು ಪುರಸಭೆ ಮಧ್ಯೆ ಶೌಚಾಲಯ ನಿರ್ವಹಣೆ ವಿಷಯದಲ್ಲಿ ಗೊಂದಲ ಉಂಟಾಗಿರುವುದು ನಿಜವೇ ಹಾಗಿದ್ದಲ್ಲಿ, ಇದನ್ನು ಬಗೆಹರಿಸಿ ಸಾರ್ವಜನಿಕರಿಗೆ ಶೌಚಾಲಯ ಸೌಲಭ್ಯ ಒದಗಿಸಲು ಕ್ರಮ ಜರುಗಿಸಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–120/400 ಪ್ರತಿಗಳು/25–01–2021